**ಶ್ರೀ ಪದ್ಮನಾಭ ಕೊಟ್ಟಾರಿ ಕೆ (ವಿಟ್ಲ) 122(346)**

ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ರಾಜ್ಯದಲ್ಲಿ ಎಸ್ ಎಸ್ ಎಲ್ ಸಿ ವರೆಗಿನ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಉಚಿತ ಪಠ್ಯ ಪುಸ್ತಕ, ಮಧ್ಯಾಹ್ನದ ಬಿಸಿ ಊಟದ ಯೋಜನೆಗಳನ್ನು ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಿಗೆ ನೀಡಲಾಗುತ್ತಿದೆಯೇ?

ಆ) ಈ ಯೋಜನೆಯನ್ನು ಅನುದಾನ ರಹಿತ ಶಾಲೆಗಳನ್ನು ವಿಸ್ತರಿಸಲಾಗುತ್ತಿದೆಯೇ, ಇಲ್ಲವಾದರೆ ಅನುದಾನ ರಹಿತ ಶಾಲೆಗಳಲ್ಲಿ ಕನ್ನಡ ಮಾಧ್ಯಮದ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತಿಲ್ಲವೆ,

ಇ) ಈ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ

**ಶ್ರೀ ಎಸ್ ಬಸವರಾಜ ಹೊರಟ್ಟಿ**

ಅ) 1) ಉಚಿತ ಸಮವಸ್ತ್ರಗಳನ್ನು ರಾಜ್ಯದ ಸರ್ಕಾರಿ ಶಾಲೆಗಳಲ್ಲಿ 1ರಿಂದ 10ನೇ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿದೆ

2)2007–08ನೇ ಸಾಲಿನಿಂದ 1ರಿಂದ 10ನೇ ತರಗತಿವರೆಗಿನ ಎಲ್ಲಾ ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳಿಗೆ ಮತ್ತು ಅನುದಾನಿತ ಶಾಲೆಗಳಲ್ಲಿ 1ರಿಂದ 8ನೇ ತರಗತಿವರೆಗೆ ವ್ಯಾಸಂಗ ಮಾಡುತ್ತಿರುವ ಎಲ್ಲಾ ಬಾಲಕಿಯರಿಗೆ ಮತ್ತು ಪರಿಶಿಷ್ಟ ಜಾತಿ/ ಪಂಗಡದ ಬಾಲಕರಿಗೆ ಉಚಿತ ಪಠ್ಯ ಪುಸ್ತಕಗಳನ್ನು ನೀಡಲಾಗುತ್ತಿದೆ

3) ಮಧ್ಯಾಹ್ನ ಬಿಸಿ ಊಟ ನೀಡುವ ಕಾರ್ಯಕ್ರಮವನ್ನು ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ 1ರಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಎಲ್ಲಾ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿದೆ

ಆ) ಇಲ್ಲ

ಇ) ಅನುದಾನಿತ ರಹಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಈ ಕಾರ್ಯಕ್ರಮವನ್ನು ವಿಸ್ತರಿಸುವ ಪ್ರಸ್ತಾವನೆ ಸದ್ಯಕ್ಕೆ ಸರ್ಕಾರದ ಮುಂದಿಲ್ಲ

**ಶ್ರೀ ಪದ್ಮನಾಭ ಕೊಟ್ಟಾರಿ ಕೆ (ವಿಟ್ಲ)123(347)**

ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ,

ಅ) ಸರ್ವ ಶಿಕ್ಷಣ ಅಭಿಯಾನದಲ್ಲಿ ಪ್ರಾಥಮಿಕ ಶಾಲೆಗಳಿಗೆ ಕೊರಡಿಗಳನ್ನು ಒದಗಿಸಲಾಗುತ್ತಿದೆಯೇ? ಇಲ್ಲವಾದಲ್ಲಿ ಯಾವ ಕಾರಣಕ್ಕಾಗಿ ನೀಡಲಾಗುತ್ತಿಲ್ಲ?

ಆ) ಕೊರಡಿಯ ಕೊರತೆ ಇರುವ ಶಾಲೆಗಳಿಗೆ ಯಾವ ಯೋಜನೆಯಲ್ಲಿ ಕೊರಡಿಗಳನ್ನು ಒದಗಿಸಲಾಗುವುದು?

ಇ) ಸರ್ವ ಶಿಕ್ಷಣ ಅಭಿಯಾನದ ಎಲ್ಲಾ ಯೋಜನೆಗಳು ಪ್ರೌಢಶಾಲೆಗಳಿಗೆ ಲಭಿಸುತ್ತಿದೆಯೇ? ಲಭಿಸುತ್ತಿದ್ದರೆ ಪ್ರೌಢಶಾಲೆಗಳಿಗೆ ಈ ಯೋಜನೆಯಡಿ ಕೊರಡಿಗಳನ್ನು ನಿರ್ಮಿಸಲಾಗುವುದೇ?

**ಶ್ರೀ ಎಸ್ ಬಸವರಾಜ ಹೊರಟ್ಟಿ**

ಅ) ಸರ್ವ ಶಿಕ್ಷಣ ಅಭಿಯಾನ ಯೋಜನೆಯಡಿಯಲ್ಲಿ ಪ್ರತಿ ಜಿಲ್ಲೆಗಳ ಪ್ರಸ್ತಾವನೆ ಮತ್ತು ಅರ್ಹತೆ ಮೇರೆಗೆ ಕೇಂದ್ರ ಸರ್ಕಾರವು ಯೋಜನೆಗೆ ನೀಡುವ ಅನುಮೋದನೆಯಂತೆ ಪ್ರಾಥಮಿಕ ಶಾಲೆಗಳಿಗೆ ಕೊರಡಿಗಳನ್ನು ಒದಗಿಸಲಾಗುತ್ತಿದೆ

ಆ) ಇಲ್ಲ